ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ
BANGALORE METRO RAIL CORPORATION LIMITED

ಸಂಖ್ಯೆ: ಬಿಎಂಆರ್‌ಸಿಎಲ್/ ಮುಸಾಸಂಅ/ಮಾಧ್ಯಮ ಪ್ರಕಟಣೆ/2023-24 ದಿನಾಂಕ: 09.08.2023

# ಮಾಧ್ಯಮ ಪ್ರಕಟಣೆ

**ವಿಷಯ: ದಿ. 10, 11 ಮತ್ತು 14.08.2023 ರಂದು ಬೆಳಿಗ್ಗೆ 5.00 ಗಂಟೆಯಿಂದ 7.00 ಗಂಟೆಯವರೆಗೆ ನೇರಳೆ ಮಾರ್ಗದ ಮೆಟ್ರೋ ರೈಲು ಸೇವೆಗಳಲ್ಲಿ ಬದಲಾವಣೆ.**

ಬೈಯಪ್ಪನಹಳ್ಳಿಯಿಂದ ಕೃಷ್ಣರಾಜಪುರ ಮೆಟ್ರೋ ನಿಲ್ದಾಣದ ದವರೆಗೆ ಮೆಟ್ರೋ ಸೇವೆಗಳನ್ನು ವಿಸ್ತರಿಸುವ ಸಲುವಾಗಿ, ನಿಗಮವು ದಿ 09.08.2023 ರವರೆಗೆ ಬೈಯಪ್ಪನಹಳ್ಳಿ ಟರ್ಮಿನಲ್‌ನಿಂದ ಸ್ವಾಮಿ ವಿವೇಕಾನಂದ ರಸ್ತೆ ಮೆಟ್ರೋ ನಿಲ್ದಾಣ ಹಾಗೂ ಕೃಷ್ಣರಾಜಪುರ ಮತ್ತು ವೈಟ್‌ಫೀಲ್ಡ್ (ಕಾಡುಗೋಡಿ) ನಿಲ್ದಾಣಗಳವರೆಗೆ ಬೆಳಿಗ್ಗೆ 5.00 ಗಂಟೆಯಿಂದ 7.00 ಗಂಟೆಯವರೆಗೆ ಸಿಗ್ನಲಿಂಗ್ ಮತ್ತು ಇತರ ಸಂಬಂಧಿತ ಕಾಮಗಾರಿಗಾಗಿ ರೈಲು ಸೇವೆಗಳನ್ನು ಸ್ಥಗಿತಗೊಳಿಸಲಾಗಿತ್ತು. ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲು, ದಿ 10 ಮತ್ತು 11ನೇ ಆಗಸ್ಟ 2023 ವರೆಗೆ ಮತ್ತೆ ಸ್ಥಗಿತಗೊಳಿಸಲಾಗುವುದು.

ಸದರಿ ದಿನಗಳಂದು ಬೆಳ್ಳಿಗೆ 5.00 ಗಂಟೆಯಿಂದ 7.00 ಗಂಟೆಯವರೆಗೆ, ಸ್ವಾಮಿ ವಿವೇಕಾನಂದ ರಸ್ತೆ ಮೆಟ್ರೋ ನಿಲ್ದಾಣದಿಂದ ಕೆಂಗೇರಿ ನಿಲ್ದಾಣದವರೆಗೆ ಮೆಟ್ರೋ ರೈಲು ಸೇವೆಗಳು ಲಭ್ಯವಿರುತ್ತದೆ.

ಇದಲ್ಲದೆ, ಕೆಂಗೇರಿ ನಿಲ್ದಾಣದಿಂದ ರೈಲು ಸೇವೆಯನ್ನು ಚಲ್ಲಘಟ್ಟ ನಿಲ್ದಾಣದವರೆಗೆ ವಿಸ್ತರಿಸಲು ಸಿಗ್ನಲಿಂಗ್ ಮತ್ತು ಇತರ ಸಂಬಂಧಿತ ಕಾಮಗಾರಿಗಳಿಗಾಗಿ ದಿ 14 ನೇ ಆಗಸ್ಟ 2023 ರಂದು ಬೆಳಿಗ್ಗೆ 5.00 ಗಂಟೆಯಿಂದ 7.00 ಗಂಟೆಯವರೆಗೆ ಕೆಂಗೇರಿ ಮತ್ತು ವಿಜಯನಗರ ಮೆಟ್ರೋ ನಿಲ್ದಾಣಗಳ ನಡುವೆ ಮೆಟ್ರೋ ಸೇವೆಗಳು ಇರುವುದಿಲ್ಲ. ಈ ಸಮಯದಲ್ಲಿ ಬೈಯಪ್ಪನಹಳ್ಳಿ ಮತ್ತು ವಿಜಯನಗರ ಮೆಟ್ರೋ ನಿಲ್ದಾಣಗಳ ನಡುವೆ ರೈಲು ಸೇವೆ ಇರುತ್ತದೆ.

ಬೆಳಿಗ್ಗೆ 7.00 ಗಂಟೆಯ ನಂತರ, ಬೈಯಪ್ಪನಹಳ್ಳಿ ಮತ್ತು ಕೆಂಗೇರಿ ಮೆಟ್ರೋ ನಿಲ್ದಾಣಗಳ ನಡುವೆ ಹಾಗೂ ಕೃಷ್ಣರಾಜಪುರ ಮತ್ತು ವೈಟ್‌ಫೀಲ್ಡ್ (ಕಾಡುಗೋಡಿ) ಮೆಟ್ರೋ ನಿಲ್ದಾಣಗಳ ನಡುವೆ ಎಂದಿನಂತೆ ಮೆಟ್ರೋ ರೈಲು ಸೇವೆಗಳು ಸೇವೆಗಳು ರಾತ್ರಿ 11.00 ರವರೆಗೆ ಲಭ್ಯವಿರುತ್ತದೆ.

ಹಸಿರು ಮಾರ್ಗದ ರೈಲು ಸೇವೆಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ನಮ್ಮ ಮೆಟ್ರೋ ಪ್ರಯಾಣಿಕರು ಸದರಿ ಬದಲಾವಣೆಯನ್ನು ಗಮನಿಸಬೇಕೆಂದು ಹಾಗೂ ಸಹಕರಿಸಲು ಕೋರಿದೆ. ಪ್ರಯಾಣಿಕರಿಗೆ ಇದರಿಂದಾಗುವ ಅನಾನುಕೂಲತೆಗೆ ವಿಷಾದಿಸಿದೆ.

**ಸಹಿ/-**

**ಮುಖ್ಯ ಸಾರ್ವಜನಿಕ ಸಂಪರ್ಕ ಅಧಿಕಾರಿ**

Phone: +91-(0)80-22969300 / 22969301, Fax: +91-(0)80-22969222, GST No.: AACB4881D
E-mail: contactus@bmrc.co.in Web: www.bmrc.co.in, CIN No.: U16286KA1994GOI016286